ಶ್ರೀ ಬಸವೇಶ್ವರ ಯುವಕರ ಸಂಘದ ಗಣೇಶೋತ್ಸವ ಸಂಪನ್ನ

ತಾಂಡವಪುರ: ಮೈಸೂರು ಜಿಲ್ಲೆ ನಂಜನಗೂಡು ತಾಲೂಕು ಚಿಕ್ಕಯನ ಛತ್ರ ಹೋಬಳಿ ವರುಣ ವಿಧಾನಸಭಾ ಕ್ಷೇತ್ರಕ್ಕೆ ಸುರುವ ತಾಂಡವಪುರ ಗ್ರಾಮದ ಶ್ರೀ ಬಸವೇಶ್ವರ ಯುವಕರ ಸಂಘದ ವತಿಯಿಂದ ಅದ್ದೂರಿಯಾಗಿ ಗೌರಿ ಗಣೇಶ ಹಬ್ಬವನ್ನು ಆಚರಿಸಿ ಕಪಿಲ ನದಿಯಲ್ಲಿ ವಿಸರ್ಜನೆ ಮಾಡಿದರು.

ಗ್ರಾಮದ ಮಠದಲ್ಲಿ ಗೌರಿ ಗಣೇಶ ಮೂರ್ತಿಗಳನ್ನು ಪ್ರತಿಷ್ಠಾಪಿಸಿ ಕಳೆದು ಒಂದು ವಾರಗಳಿಂದ ಪ್ರತಿದಿನ ವಿಶೇಷ ಪೂಜೆ ಅಭಿಷೇಕ ಮಾಡುವ ಮೂಲಕ ಭಕ್ತಿ ಭಾವದಿಂದ ಗೌರಿ ಗಣೇಶ ಮೂರ್ತಿಗಳಿಗೆ ವಿಶೇಷ ಪೂಜೆ ಸಲ್ಲಿಸಿದರು

ಗಣೇಶ್ ಮೂರ್ತಿಯನ್ನು ಟ್ರಾಕ್ಟರ್ ನಲ್ಲಿ ಕೂರಿಸಿ ಗ್ರಾಮದ ಪ್ರಮುಖ ಬೀದಿಗಳಲ್ಲಿ ಮೆರವಣಿಗೆ ಮೂಲಕ ಪಟಾಕಿ ಸಿಡಿಸಿ ಭಕ್ತಿ ಭಾವದಿಂದ ಪೂಜೆ ಸಲ್ಲಿಸಿ ಅದ್ದೂರಿಯಾಗಿ ಗಣೇಶ ಉತ್ಸವವನ್ನು ಆಚರಿಸಲಾಯಿತು.

ಗಣೇಶನ ಮೆರವಣಿಗೆ ಎಂದರೆ ಭಯ ಭೀತಿಯಿಂದ ಆಚರಿಸುವ ವಾತಾವರಣ ನಿರ್ಮಾಣವಾಗಿದೆ ಆದರೆ ಚಿಕ್ಕಯ್ಯನ ಛತ್ರ ಹೋಬಳಿ ವರುಣ ವಿಧಾನಸಭಾ ಕ್ಷೇತ್ರಕ್ಕೆ ಸೇರುವ ತಾಂಡವಪುರ ಗ್ರಾಮಸ್ಥರು ಭಕ್ತಿ ಭಾವದಿಂದ ಶಾಂತಿಯುತವಾಗಿ ಸ್ನೇಹ ಸೌವಾದ ಹಿತವಾಗಿ ಗ್ರಾಮಸ್ಥರು ಗಣೇಶನ ಹಬ್ಬವನ್ನು ಹಾಗೂ ಮೆರವಣಿಗೆಯನ್ನು ಆಚರಿಸುತ್ತಿರುವುದು ವಿಶೇಷವಾಗಿ–ತ್ತು. ಮುನ್ನೆಚರಿಕೆ ಕ್ರಮವಾಗಿ ನಂಜನಗೂಡು ಗ್ರಾಮಾಂತರ ಪೊಲೀಸರು ಬಿಗಿ ಪೊಲೀಸ್ ಬಂದೋಬಸ್ತ್ ಏರ್ಪಡಿಸಿದರು

ಈ ಸಂದರ್ಭದಲ್ಲಿ ಗ್ರಾಮದ ಗೌಡಿಕೆ ಶಿವಣ್ಣ ಗ್ರಾಮ ಪಂಚಾಯಿತಿ ಮಾಜಿ ಸದಸ್ಯರಾದ ಮಹಾದೇವ ಮಧು ಪಾಟೀಲ್ ಹಾಗೂ ಶ್ರೀ ಬಸವೇಶ್ವರ ಯುವಕರ ಸಂಘದ ಪದಾಧಿಕಾರಿಗಳು ಗ್ರಾಮದ ಮುಖಂಡರುಗಳು ಹಾಜರಿದ್ದರು.

ಎರಡು ದಿನಗಳ ಎನ್‌ಎಸ್‌ಎಸ್ ಕಾರ್ಯಕ್ರಮ ಅಧಿಕಾರಿಗಳ ಪುನಶ್ಚೇತನ ಕಾರ್ಯಾಗಾರ.

ಬೆಂಗಳೂರು: ದಾಸರಹಳ್ಳಿ ವಿಧಾನಸಭಾ ಕ್ಷೇತ್ರದ ಹೆಸರಘಟ್ಟ ಮುಖ್ಯ ರಸ್ತೆಯಲ್ಲಿರುವ ಅಸೆಂಟ್ ಪದವಿ ಪೂರ್ವ ಕಾಲೇಜಿನಲ್ಲಿ ಶಾಲಾ ಶಿಕ್ಷಣ ಇಲಾಖೆ ಹಾಗೂ ರಾಷ್ಟ್ರೀಯ ಸೇವಾ ಯೋಜನೆ (ಎನ್‌ಎಸ್‌ಎಸ್), ಬೆಂಗಳೂರು ವಿಭಾಗದ ವತಿಯಿಂದ ಪದವಿಪೂರ್ವ ಕಾಲೇಜುಗಳ ಎನ್‌ಎಸ್‌ಎಸ್ ಕಾರ್ಯಕ್ರಮಾಧಿಕಾರಿಗಳಿಗಾಗಿ ಎರಡು ದಿನಗಳ ಪುನಶ್ಚೇತನ ಕಾರ್ಯಾಗಾರವನ್ನು ಆಯೋಜಿಸಲಾಗಿತ್ತು.

ಕಾರ್ಯಾಗಾರವನ್ನು ಎನ್‌ಎಸ್‌ಎಸ್ ರಾಜ್ಯ ಸಂಯೋಜನಾಧಿಕಾರಿ ಶಿವ ಮಾದಯ್ಯ ಉದ್ಘಾಟಿಸಿದರು. ಕಾರ್ಯಕ್ರಮಾಧಿಕಾರಿಗಳ ಜವಾಬ್ದಾರಿ, ವಿದ್ಯಾರ್ಥಿಗಳಲ್ಲಿ ಸಾಮಾಜಿಕ ಬದ್ಧತೆ ಬೆಳೆಸುವುದು, ಸಮುದಾಯ ಸೇವಾ ಚಟುವಟಿಕೆಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನ ಗೊಳಿಸುವುದು ಸೇರಿದಂತೆ ವಿವಿಧ ವಿಷಯಗಳ ಕುರಿತು ಕಾರ್ಯಾಗಾರದಲ್ಲಿ ಮಾರ್ಗದರ್ಶನ ನೀಡಲಾಯಿತು.

ಶಿವ ಮಾದಯ್ಯ, ಎನ್‌ಎಸ್‌ಎಸ್ ರಾಜ್ಯ ಸಂಯೋಜನಾಧಿಕಾರಿ ಮಾತನಾಡಿ, "ಎನ್‌ಎಸ್‌ಎಸ್ ಎನ್ನುವುದು ಕೇವಲ ಸೇವಾ ಕಾರ್ಯಕ್ರಮಗಳಿಗೆ ಸೀಮಿತವಾಗಿಲ್ಲ. ವಿದ್ಯಾರ್ಥಿಗಳಲ್ಲಿ ಸಾಮಾಜಿಕ ಜವಾಬ್ದಾರಿ, ನಾಯಕತ್ವ ಗುಣ ಹಾಗೂ ಮಾನವೀಯ ಮೌಲ್ಯಗಳನ್ನು ಬೆಳೆಸುವ ಪ್ರಮುಖ ವೇದಿಕೆಯಾಗಿದೆ. ಕಾರ್ಯಕ್ರಮಾಧಿಕಾರಿಗಳು ವಿದ್ಯಾರ್ಥಿ ಗಳನ್ನು ಸಮಾಜಮುಖಿ ಚಟುವಟಿಕೆಗಳಲ್ಲಿ ಸಕ್ರಿಯವಾಗಿ ತೊಡಗಿಸಿಕೊಳ್ಳುವಂತೆ ಮಾರ್ಗದರ್ಶನ ನೀಡಬೇಕು. ಈ ಪುನಶ್ಚೇತನ ಕಾರ್ಯಾಗಾರದಿಂದ ಎನ್‌ಎಸ್‌ಎಸ್ ಚಟುವಟಿ–ಕೆಗಳನ್ನು ಇನ್ನಷ್ಟು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು ಅಗತ್ಯವಾದ ಹೊಸ ಆಲೋಚನೆಗಳು ಹಾಗೂ ಮಾರ್ಗದರ್ಶನ ದೊರೆಯಲಿದೆ" ಎಂದರು.

ಅಸೆಂಟ್ ಪದವಿ ಪೂರ್ವ ಕಾಲೇಜಿನ ಪ್ರಾಂಶುಪಾಲ ಬಿ.ಎಂ. ವೆಂಕಟೇಶ್ ಮಾತನಾಡಿ, "ವಿದ್ಯಾರ್ಥಿಗಳಲ್ಲಿ ಶಿಕ್ಷಣದ ಜೊತೆಗೆ ಸೇವಾ ಮನೋಭಾವ ಬೆಳೆಸುವುದು ಇಂದಿನ ಅಗತ್ಯವಾಗಿದೆ. ಎನ್‌ಎಸ್‌ಎಸ್ ಮೂಲಕ ವಿದ್ಯಾರ್ಥಿಗಳು ಸಮಾಜದ ಸಮಸ್ಯೆಗಳನ್ನು ಅರಿತುಕೊಂಡು, ಅವುಗಳ ಪರಿಹಾರಕ್ಕೆ ತಮ್ಮದೇ ಆದ ರೀತಿಯಲ್ಲಿ ಕೊಡುಗೆ ನೀಡಲು ಸಾಧ್ಯವಾಗುತ್ತದೆ. ಇಂತಹ ಕಾರ್ಯಾಗಾರಗಳು ಹೊಸ ಚೈತನ್ಯ ನೀಡುವುದರೊಂದಿಗೆ, ವಿದ್ಯಾರ್ಥಿಗಳನ್ನು ಮತ್ತಷ್ಟು ಪರಿಣಾಮಕಾರಿಯಾಗಿ ಸಮಾಜಮುಖಿ ಕಾರ್ಯಗಳಲ್ಲಿ ತೊಡಗಿಸಿಕೊಳ್ಳಲು ಸಹಕಾರಿಯಾಗುತ್ತವೆ" ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಎನ್‌ಎಸ್‌ಎಸ್ ಪ್ರಾದೇಶಿಕ ನಿರ್ದೇಶಕ ಗಿರಿಧರ್ ಉಪಾಧ್ಯಾಯ, ಬೆಂಗಳೂರು ಜಿಲ್ಲಾ ನೋಡಲ್ ಅಧಿಕಾರಿ ರುದ್ರೇಶ್ ಎಂ.ಇ. ಸೇರಿದಂತೆ ಅಧಿಕಾ–ರಿಗಳು ಹಾಗೂ ಎನ್‌ಎಸ್‌ಎಸ್ ಕಾರ್ಯಕ್ರಮಾಧಿಕಾರಿಗಳು ಉಪಸ್ಥಿತರಿದ್ದರು.

ಸಿಂಹಾಸನರೂಢ ಬೃಹತ್ ಗಣೇಶನ ಪ್ರತಿಷ್ಠಾಪನೆ



ಬೆಂಗಳೂರು: ದಾಸರಹಳ್ಳಿ ವಿಧಾನಸಭಾ ಕ್ಷೇತ್ರದ ಪೀಣ್ಯ ಎರಡನೇ ಹಂತದ ಭಾಗದಲ್ಲಿ ಶಾಸಕ ಎಸ್.ಮುನಿರಾಜು ಸಾರಥ್ಯದಲ್ಲಿ ಹಾಗೂ ಪ್ರಭಾವಿ ಮುಖಂಡ ಗುರು ನಿಶ್ಚಲ್ ನೇತೃತ್ವದಲ್ಲಿ ದಾಸರಹಳ್ಳಿ ಸಾಮೂಹಿಕ ಗಣೇಶೋತ್ಸವ ಸಮಿತಿಯಿಂದ ಪ್ರಪ್ರಥಮ ಬಾರಿಗೆ

ಹಮ್ಮಿಕೊಂಡಿರುವ 3 ದಿನಗಳ ಗಣೇಶೋತ್ಸವದಲ್ಲಿ ಸಿಂಹಾಸನದ ಮೇಲೆ ವಿರಾಜಮಾನವಾಗಿರುವ ವಿಶಿಷ್ಟ ಗಣೇಶನ ಮೂರ್ತಿಯನ್ನು ಹೋಮ, ಹವನ ಹಾಗೂ ವಿಶೇಷ ಪೂಜಾ ವಿಧಿವಿಧಾನಗಳೊಂದಿಗೆ ವಿದ್ಯುಕ್ತವಾಗಿ ಪ್ರತಿಷ್ಠಾಪಿಸಿ ಸಾರ್ವಜನಿಕರ ದರ್ಶನಕ್ಕೆ ವ್ಯವಸ್ಥೆ ಕಲ್ಪಿಸಲಾಯಿತು.

ಈ ವೇಳೆ ಬಿಜೆಪಿ ಪ್ರಭಾವಿ ಮುಖಂಡ ಗುರು ನಿಶ್ಚಲ್ ಮಾತನಾಡಿ ಬೃಹತ್ ಗಾತ್ರದ ಗಣೇಶನ ಮೂರ್ತಿಯ ಅಲಂಕಾರ ಹಾಗೂ ವೇದಿಕೆಯ ವೈಭವ ಸಾರ್ವಜನಿಕರ ಗಮನ ಸೆಳೆಯುವಂತಿದ್ದು,ಗಣೇಶೋತ್ಸವದ ಮೂರು ದಿನಗಳೂ ವಿವಿಧ ಧಾರ್ಮಿಕ ಹಾಗೂ ಸಾಂಸ್ಕೃತಿಕ ಕಾರ್ಯ ಕ್ರಮಗಳಿಗೆ ವೇದಿಕೆಯಾಗಲಿದೆ.ಗಣೇಶೋತ್ಸವವು ಕೇವಲ ಧಾರ್ಮಿಕ ಆಚರಣೆಗೆ ಸೀಮಿತವಾಗದೆ, ಸಾರ್ವಜನಿಕ, ಸೌಹಾರ್ದತೆ ಹಾಗೂ ಒಗ್ಗಟ್ಟಿನ ಸಂಭ್ರಮವಾಗಿ ರೂಪುಗೊಳ್ಳಲಿ ಎಂಬ ಆಶಯದೊಂದಿಗೆ ಕಾರ್ಯಕ್ರಮವನ್ನು ಆಯೋಜಿಸ ಲಾಗಿದೆ ಎಂದರು.

ಗಣೇಶನ ಪ್ರತಿಷ್ಠಾಪನಾ ಸಂದರ್ಭದಲ್ಲಿ ವೇದಘೋಷ,ಮಂತ್ರಪಠಣ ಹಾಗೂ ಭಕ್ತಿಗೀತೆಗಳ ನಡುವೆ ಭಕ್ತರು ಅಪಾರ ಭಕ್ತಿಭಾವದಿಂದ ಪಾಲ್ಗೊಂಡರು.

ಈ ಸಂಧರ್ಭ ದಲ್ಲಿ ಶಾಸಕ ಎಸ್ ಮನಿರಾಜು, ಸುಜಾತ ಮುನಿರಾಜು, ರೇಷ್ಮಾ ಮುನಿರಾಜು, ಕಣ್ಣಪ್ಪ , ಕೃಷ್ಣಯ್ಯ, ಹೆಚ್ ಎನ್ ಗಂಗಾಧರ್, ಜೆವಿ ಶ್ರೀನಿವಾಸ್, ಬಿಎನ್ ದಿನೇಶ್, ಗುರು ಪ್ರಸಾದ್, ಬಿ ಕೃಷ್ಣಮೂರ್ತಿ, ಬೆಲ್ಮಾರ್ ಸುರೇಶ್, ಪಿಹೆಚ್ಪಾ ಜು, ಅರ್ ಸಿ ಹರೀಶ್,ನಾಗೇಶ್,ಸಪ್ತಗಿರಿ ಆನಂದ್, ಜೆವಿ ಸತೀಶ್, ಮಂಡ್ಯ ರವಿ, ಸಪ್ತಗಿರಿ ಮಂಜುನಾಥ್, ನಿಸರ್ಗ ಕೆಂಪರಾಜು, ಬೈರೇಗೌಡ, ಭರತ್ ಸೌಂಧರ್ಯ, ಶೆಟ್ಟಿಹಳ್ಳಿ ಸುರೇಶ್, ಸೌಭಾಗ್ಯ ಉಮೇಶ್, ಸೇರಿದಂತೆ ಸಾರ್ವಜನಿಕರು ಭಾಗಿಯಾಗಿದ್ದರು.

ಕರಾಟೆಯಲ್ಲಿ ಜಪಾನ್ ಶಿಟೋ–ರಯ್ ಶಾಲೆಯ ಮಕ್ಕಳ ಮಿಂಚಿನ ಸಾಧನೆ

ಬೆಂಗಳೂರು: ಅಂತರರಾಜ್ಯ ಮಟ್ಟದ ಮುಕ್ತ ಕರಾಟೆ ಪಂದ್ಯಾವಳಿಯು ಕೋಲಾರದಲ್ಲಿ ನಡೆದ ಪಂದ್ಯಾವಳಿಗಳಲ್ಲಿ ಬಂಗಾರಪೇಟೆಯ ಜಪಾನ್ ಶಿಟೋ –ರಯ್ ಕರಾಟೆ ಶಾಲೆಯ ಏಳು ಮಂದಿ ಮಕ್ಕಳು ಬಂಗಾರ ಮತ್ತು ಬೆಳ್ಳಿ ಪದಕಗಳನ್ನು ಪಡೆದು ರಾಜ್ಯಕ್ಕೆ ಕೀರ್ತಿ ತಂದಿದ್ದಾರೆ ಎಂದು ಗುರು ಮಾಸ್ಟರ್ ಹರೀಶ್ ತಿಳಿಸಿದರು.

ಪಟ್ಟಣದ ಎಪಿಎಂಸಿ ಬಳಿ ಇರುವ ತರಬೇತಿ ಶಾಲೆಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು ದೇಶದ ನಾನಾ ರಾಜ್ಯಗಳಿಂದ ಆಗಮಿಸಿದ್ದ ನೂರಾರು ಕಠಿಣ ಸ್ಪರ್ಧೆಗಳ ನಡುವೆ ಉತ್ತಮ ಕರಾಟೆ ಪಟುಗಳಾದ ಜಾನ್ಹವಿ ಅಕ್ಷಯ್, ನಿತೀನ್, ಪೂರ್ವಿಕ ,ಧನುಷ್ ಪ್ರಥಮ ಸ್ಥಾನದಲ್ಲಿ ಪ್ರದರ್ಶನ ನೀಡಿ ಬಂಗಾರದ ಪದಕ ಪಡೆದರೆ, ಗೋಕುಲ್ ಯಶಸ್ ಎರಡನೇ ಸ್ಥಾನ ಪಡೆದು ಬೆಳ್ಳಿ ಪದಕ ಪಡೆದು ವಿಜಯದ್ವಜ ಹಾರಿಸುವಮೂಲಕ ಬಂಗಾರಪೇಟೆ ಹೆಸರನ್ನು ರಾಷ್ಟ್ರ ಮಟ್ಟದಲ್ಲಿ ಪರಿಚಯಿಸಿದ್ದಾರೆ.

2028ರ ಚುನಾವಣೆ ಸಿದ್ಧತೆ: ಅ.1ರಿಂದ ಬಿಜೆಪಿಯ 'ಬೂತ್ ವಿಜಯ ಸಂಕಲ್ಪ ಯಾತ್ರೆ'

ಬೆಂಗಳೂರು: 2028ರ ವಿಧಾನಸಭಾ ಚುನಾವಣೆಗೆ ರಾಜಕೀಯ ಪಕ್ಷಗಳು ಈಗಿನಿಂದಲೇ ಸಂಘಟನಾ ಚಟುವಟಿ–ಕೆಗಳನ್ನು ಚುರುಕುಗೊಳಿಸುತ್ತಿರುವ ಬೆನ್ನಲ್ಲೇ, ಕರ್ನಾಟಕ ಬಿಜೆಪಿ ಕೂಡ ಬೂತ್ ಮಟ್ಟದಿಂದ ಪಕ್ಷದ ಸಂಘಟನೆ ಬಲಪಡಿಸುವತ್ತ ಗಮನ ಹರಿಸಿದೆ. ಇದರ ಭಾಗವಾಗಿ 'ಬೂತ್ ವಿಜಯ ಸಂಕಲ್ಪ ಯಾತ್ರೆ' ಆರಂಭಿಸಲು ಬಿಜೆಪಿ ಸಜ್ಜಾಗಿದ್ದು, ಅಕ್ಟೋಬರ್ 1ರಿಂದ ರಾಜ್ಯಾದ್ಯಂತ ಯಾತ್ರೆ ನಡೆಯಲಿದೆ ಎಂದು ಪಕ್ಷದ ನಾಯಕರು ತಿಳಿಸಿದ್ದಾರೆ.

ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಅವರ ನೇತೃತ್ವದಲ್ಲಿ ನಡೆಯಲಿರುವ ಈ ಯಾತ್ರೆಗೆ ಅಕ್ಟೋಬರ್ 1ರಂದು ಕೋಲಾರ ಜಿಲ್ಲೆಯ ಕುರುಡುಮಲೆ ಗಣಪತಿ ದೇವಸ್ಥಾನದಲ್ಲಿ ವಿಶೇಷ ಪೂಜೆ ಸಲ್ಲಿಸುವ ಮೂಲಕ ಚಾಲನೆ ನೀಡಲು ನಿರ್ಧರಿಸಲಾಗಿದೆ. ಮೊದಲ ಹಂತದಲ್ಲಿ ಅಕ್ಟೋಬರ್ 1ರಿಂದ 10ರವರೆಗೆ 16 ವಿಧಾನಸಭಾ ಕ್ಷೇತ್ರಗಳಲ್ಲಿ ಯಾತ್ರೆ ನಡೆಯಲಿದೆ. ಬಳಿಕ ಹಂತ ಹಂತವಾಗಿ ರಾಜ್ಯದ ಉಳಿದ ವಿಧಾನಸಭಾ ಕ್ಷೇತ್ರಗಳಿಗೂ ಯಾತ್ರೆಯನ್ನು ವಿಸ್ತರಿಸಲು ಪಕ್ಷ ಯೋಜನೆ ರೂಪಿಸಿದೆ.

ಮುಂದಿನ ಮೂರು ತಿಂಗಳ ಅವಧಿಯಲ್ಲಿ ರಾಜ್ಯದ ಎಲ್ಲಾ 224 ವಿಧಾನಸಭಾ ಕ್ಷೇತ್ರಗಳನ್ನು ತಲುಪುವುದು ಯಾತ್ರೆಯ ಪ್ರಮುಖ ಗುರಿಯಾಗಿದೆ. ಬೂತ್ ಮಟ್ಟದಲ್ಲಿ ಪಕ್ಷದ ಸಂಘಟನೆಯನ್ನು ಮತ್ತಷ್ಟು ಬಲಪಡಿಸುವುದು, ಕಾರ್ಯಕರ್ತರನ್ನು ಸಕ್ರಿಯಗೊಳಿಸುವುದು ಹಾಗೂ ಸ್ಥಳೀಯ ಮಟ್ಟದ ಸಮಸ್ಯೆಗಳನ್ನು ತಿಳಿದುಕೊಳ್ಳುವುದು ಯಾತ್ರೆಯ ಪ್ರಮುಖ ಉದ್ದೇಶಗಳಲ್ಲಿ ಸೇರಿವೆ ಎಂದು ಬಿಜೆಪಿ ರಾಜ್ಯ ಪ್ರಧಾನ ಕಾರ್ಯದರ್ಶಿ ಪ್ರೀತಂ ಗೌಡ ತಿಳಿಸಿದ್ದಾರೆ.

ಯಾತ್ರೆ ಕೇವಲ ಪಕ್ಷದ ಸಂಘಟನಾ ಸಭೆಗಳಿಗೆ ಸೀಮಿತವಾಗಿರದೆ, ಸ್ಥಳೀಯ ಜನರೊಂದಿಗೆ ನೇರ ಸಂಪರ್ಕ ಸಾಧಿಸುವ ಕಾರ್ಯಕ್ರಮವಾಗಿರಲಿದೆ ಎಂದು ಪಕ್ಷ ತಿಳಿಸಿದೆ. ರೈತರು ಹಾಗೂ ವಿವಿಧ ಸ್ಥಳೀಯ ಸಮುದಾಯಗಳ ಸಮಸ್ಯೆಗಳನ್ನು ಆಲಿಸುವುದು, ಅಗತ್ಯವಿರುವ ಕಡೆ ಸ್ಥಳಕ್ಕೆ ತೆರಳಿ ಸಮಸ್ಯೆಗಳನ್ನು ಪರಿಶೀಲಿಸುವುದು ಹಾಗೂ ಅವುಗಳನ್ನು ಪಕ್ಷದ ಮಟ್ಟದಲ್ಲಿ ಪ್ರಸ್ತಾಪಿಸುವ ಉದ್ದೇಶವಿದೆ ಎಂದು ಪ್ರೀತಂ ಗೌಡ ಹೇಳಿದ್ದಾರೆ.

ಪ್ರತಿ ವಿಧಾನಸಭಾ ಕ್ಷೇತ್ರದಲ್ಲಿ ಪಕ್ಷದ ಪ್ರಮುಖ ಕಾರ್ಯಕರ್ತರು ಹಾಗೂ ಸ್ಥಳೀಯ ಜನಪ್ರತಿನಿಧಿಗಳನ್ನು ಸಂಘಟನಾ ಚಟುವಟಿಕೆಯಲ್ಲಿ ತೊಡಗಿಸಿಕೊಳ್ಳಲು ಯೋಜಿಸಲಾಗಿದೆ. ಗ್ರಾಮ ಪಂಚಾಯಿತಿ ಅಧ್ಯಕ್ಷರು, ತಾಲೂಕು ಮಟ್ಟದ ಪ್ರತಿನಿಧಿಗಳು, ಮಾಜಿ ಜಿಲ್ಲಾ ಪಂಚಾಯಿತಿ ಸದಸ್ಯರು, ಎಪಿಎಂಸಿ ನಿರ್ದೇಶಕರು ಹಾಗೂ ನಗರ ಸ್ಥಳೀಯ ಸಂಸ್ಥೆಗಳ ಚುನಾಯಿತ ಪ್ರತಿನಿಧಿಗಳನ್ನು ಒಳಗೊಂಡಂತೆ ಹೆಚ್ಚಿನ ಸಂಖ್ಯೆಯ ಕಾರ್ಯಕರ್ತರನ್ನು ಸಂಘಟನಾ ಕಾರ್ಯಕ್ರಮಗಳಿಗೆ ಸೇರಿಸಿಕೊಳ್ಳುವ ಉದ್ದೇಶವಿದೆ ಎಂದು ಪಕ್ಷದ ಮೂಲಗಳು ತಿಳಿಸಿವೆ.

ಇತ್ತೀಚೆಗೆ ಬಿಜೆಪಿ ನಡೆಸಿದ 'ಬಳ್ಳಾರಿ ಚಲೋ' ಪಾದಯಾತ್ರೆಯ ಬಳಿಕ ರಾಜ್ಯಾದ್ಯಂತ ಮತ್ತೊಂದು ಸಂಘಟನಾ ಕಾರ್ಯಕ್ರಮಕ್ಕೆ ಪಕ್ಷ ಮುಂದಾಗಿದೆ. ಬಳ್ಳಾರಿ ಚಲೋ ಸಂದರ್ಭದಲ್ಲಿ ಪ್ರಸ್ತಾಪಿಸಲಾದ ವಿವಿಧ ಸಾರ್ವಜನಿಕ ಸಮಸ್ಯೆಗಳ ಮುಂದುವರಿದ ಚರ್ಚೆಯ ಜೊತೆಗೆ, ಇದೀಗ ಬೂತ್ ಮಟ್ಟದ ಸಂಘಟನೆಯನ್ನು ಚುನಾವಣಾ ದೃಷ್ಟಿಯಿಂದ ಸಜ್ಜುಗೊಳಿಸುವತ್ತ ಬಿಜೆಪಿ ಗಮನ ಹರಿಸಿದೆ.

'ಬೂತ್ ವಿಜಯ ಸಂಕಲ್ಪ ಯಾತ್ರೆ'ಯನ್ನು ಪ್ರಧಾನಿ ನರೇಂದ್ರ ಮೋದಿ ಅವರ ಸಾರ್ವಜನಿಕ ಜೀವನದ 25 ವರ್ಷಗಳನ್ನು ಗುರುತಿಸುವ 'ಸೇವಾ ಸಂಕಲ್ಪ ಅಭಿಯಾನ'ದೊಂದಿಗೂ ಸಮನ್ವಯಗೊಳಿಸಲಾಗುವುದು ಎಂದು ಬಿಜೆಪಿ ತಿಳಿಸಿದೆ. ಈ ಮೂಲಕ ಸೇವಾ ಚಟುವಟಿ–ಕೆಗಳು ಹಾಗೂ ಪಕ್ಷದ ಸಂಘಟನಾ ಕಾರ್ಯಕ್ರಮಗಳನ್ನು ಒಂದೇ ಅವಧಿಯಲ್ಲಿ ನಡೆಸಲು ಪಕ್ಷ ಮುಂದಾಗಿದೆ.

ಯಾತ್ರೆಯ ಸಂದರ್ಭದಲ್ಲಿ ರಾಜ್ಯ ಬಿಜೆಪಿ ಅಧ್ಯಕ್ಷ ಬಿ.ವೈ. ವಿಜಯೇಂದ್ರ ಸೇರಿದಂತೆ ಪಕ್ಷದ ಪ್ರಮುಖ ನಾಯಕರು ವಿವಿಧ ಹಂತಗಳಲ್ಲಿ ಭಾಗವಹಿಸಲಿದ್ದಾರೆ. ವಿಧಾನಸಭೆಯ ವಿರೋಧ ಪಕ್ಷದ ನಾಯಕ ಆರ್.ಅಶೋಕ್ ಹಾಗೂ ವಿಧಾನ ಪರಿಷತ್‌ನ ವಿರೋಧ ಪಕ್ಷದ ನಾಯಕ ಛಲವಾದಿ ನಾರಾಯಣಸ್ವಾಮಿ ಸೇರಿದಂತೆ ಹಿರಿಯ ನಾಯಕರೂ ಸಂಘಟನಾ ಕಾರ್ಯಕ್ರಮಗಳಲ್ಲಿ ಪಾಲ್ಗೊಳ್ಳಲಿದ್ದಾರೆ ಎಂದು ಪಕ್ಷದ ಪ್ರಧಾನ ಕಾರ್ಯದರ್ಶಿ ಪ್ರೀತಂ ಗೌಡ ತಿಳಿಸಿದ್ದಾರೆ.

2028ರ ವಿಧಾನಸಭಾ ಚುನಾವಣೆಗೆ ಇನ್ನೂ ಸಮಯವಿದ್ದರೂ ರಾಜ್ಯ ಬಿಜೆಪಿ ಬೂತ್ ಮಟ್ಟದಿಂದ ಸಂಘಟನಾ ಸಿದ್ಧತೆ ಆರಂಭಿಸಿರುವುದು ಈ ಯಾತ್ರೆಯ ಮೂಲಕ ಗೋಚರಿಸುತ್ತಿದೆ. ಮುಂದಿನ ಮೂರು ತಿಂಗಳಲ್ಲಿ 224 ವಿಧಾನಸಭಾ ಕ್ಷೇತ್ರಗಳನ್ನು ತಲುಪುವ ಗುರಿಯೊಂದಿಗೆ ನಡೆಯಲಿರುವ 'ಬೂತ್ ವಿಜಯ ಸಂಕಲ್ಪ ಯಾತ್ರೆ'ಯ ಮೂಲಕ ಪಕ್ಷದ ಸಂಘಟನಾ ಜಾಲ, ಕಾರ್ಯಕರ್ತರ ಚಟುವಟಿಕೆ ಹಾಗೂ ಸ್ಥಳೀಯ ಸಮಸ್ಯೆಗಳ ಕುರಿತ ಸಂಪರ್ಕಕ್ಕೆ ಹೆಚ್ಚಿನ ಒತ್ತು ನೀಡಲು ಬಿಜೆಪಿ ಮುಂದಾಗಿದೆ.

ಅಟ್ಟಿಕಾ ಗೋಲ್ಡ್ ವಿರುದ್ಧ ತನಿಖೆ: ವಿವಿಧೆಡೆ ಅಧಿಕಾರಿಗಳ ಶೋಧ

ಬೆಂಗಳೂರು: ರಾಜ್ಯದ ಪ್ರಮುಖ ಚಿನ್ನ ಖರೀದಿ ಸಂಸ್ಥೆಗಳಲ್ಲಿ ಒಂದಾಗಿರುವ ಅಟ್ಟಿಕಾ ಗೋಲ್ಡ್ ಕಂಪನಿಗೆ ಸಂಕಷ್ಟ ಮತ್ತಷ್ಟು ಹೆಚ್ಚಾಗಿದೆ. ಕಳ್ಳತನವಾಗಿರುವ ಚಿನ್ನದ ಆಭರಣಗಳನ್ನು ಖರೀದಿಸಿದ ಹಾಗೂ ಅಕ್ರಮ ಹಣ ವರ್ಗಾವಣೆಯಲ್ಲಿ ತೊಡಗಿರುವ ಆರೋಪಗಳ ಕುರಿತು ಜಾರಿ ನಿರ್ದೇಶನಾ ಲಯ (ಇಡಿ) ತನಿಖೆ ನಡೆಸುತ್ತಿರುವ ಬೆನ್ನಲ್ಲೇ, ಆದಾಯ ತೆರಿಗೆ ಇಲಾಖೆಯ ಅಧಿಕಾರಿಗಳು ಶುಕ್ರವಾರ ಅಟ್ಟಿಕಾ ಗೋಲ್ಡ್‌ಗೆ ಸಂಬಂಧಿಸಿದ ಹಲವು ಸ್ಥಳಗಳಲ್ಲಿ ಶೋಧ ಕಾರ್ಯಾಚರಣೆ ನಡೆಸಿದ್ದಾರೆ. ಬೆಂಗಳೂರಿನ ಜೊತೆಗೆ ವಿವಿಧ ಜಿಲ್ಲೆಗಳಲ್ಲಿರುವ ಕಚೇರಿ, ಶೋರೂಂ ಹಾಗೂ ಸಂಬಂಧಿತ ವ್ಯಕ್ತಿಗಳ ನಿವಾಸಗಳ ಮೇಲೂ ಕಾರ್ಯಾಚರಣೆ ನಡೆದಿರುವುದಾಗಿ ವರದಿಯಾಗಿದೆ.

ಅಟ್ಟಿಕಾ ಗೋಲ್ಡ್ ಸಂಸ್ಥೆಯು ಸಾರ್ವಜನಿಕರಿಂದ ಹಳೆಯ ಚಿನ್ನ ಹಾಗೂ ಚಿನ್ನಾಭರಣಗಳನ್ನು ಪಡೆದು, ಅದರ ಬದಲಿಗೆ ತಕ್ಷಣ ನಗದು ನೀಡುವ ವ್ಯವಹಾರದಲ್ಲಿ ತೊಡಗಿಸಿಕೊಂಡಿದೆ. ಈ ವ್ಯವಹಾರಕ್ಕೆ ಸಂಬಂಧಿಸಿದಂತೆ ಹಣಕಾಸು ಅಕ್ರಮಗಳು ನಡೆದಿವೆ ಎಂಬ ಆರೋಪಗಳ ಹಿನ್ನೆಲೆಯಲ್ಲಿ ಕೇಂದ್ರ ತನಿಖಾ ಸಂಸ್ಥೆಗಳ ಗಮನ ಸಂಸ್ಥೆಯತ್ತ ಹರಿದಿದೆ. ಚಿನ್ನದ ಖರೀದಿ, ಮಾರಾಟ, ಹಣದ ವಹಿವಾಟು ಹಾಗೂ ದಾಖಲೆಗಳ ನಿರ್ವಹಣೆಗೆ ಸಂಬಂಧಿಸಿದ ಹಲವು ಅಂಶಗಳನ್ನು ಅಧಿಕಾರಿಗಳು ಪರಿಶೀಲಿಸುತ್ತಿದ್ದಾರೆ.

ಈ ಹಿಂದೆ ಜಾರಿ ನಿರ